ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
ಹತ್ತನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 05ನೇ ಜುಲೈ, 2016
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಸಭಾಧ್ಯಕ್ಷರ ಚುನಾವಣೆ

1. (ಅ) ಶ್ರೀ ಕೆ.ಬಿ.ಕೋಳಿವಾಡ ಅವರನ್ನು ವಿಧಾನ ಸಭೆಯ ಅಧ್ಯಕ್ಷರನ್ನಾಗಿ ಚುನಾಯಿಸಬೇಕೆಂದು ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು ಸೂಚಿಸುವುದು;

   (ಆ) ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರು) ಅವರು ಅನುಮೋದಿಸುವುದು.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಎರಡನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಎರಡನೇ ಪಟ್ಟಿ

3. ವಿತ್ತೀಯ ಕಾರ್ಯಕಲಾಪಗಳು

2016-17ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮಂಡನೆ ಹಾಗೂ ಚರ್ಚೆ.

ಬೇಡಿಕೆ ಸಂಖ್ಯೆ	ಬೇಡಿಕೆಯ ಹೆಸರು
07	: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
14	: ಕಂದಾಯ
08	: ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
16	: ವಸತಿ

...2.

4. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಎ.ಎಸ್.ಪಾಟೀಲ್ (ನಡಹಳ್ಳಿ)** ಇವರು – ವಿಜಯಪುರ ಜಿಲ್ಲೆ ದೇವರಹಿಪ್ಪರಗಿಯಲ್ಲಿ ಹಳೆಯ ಬಸ್ ನಿಲ್ದಾಣ ಕೆಡವಿ ಪುನರ್ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

2. **ಶ್ರೀ ವಿ. ಸುನೀಲ್ ಕುಮಾರ್** ಇವರು – ರಾಜ್ಯದಲ್ಲಿ ಉಲ್ಬಣಗೊಳ್ಳುತ್ತಿರುವ ಡೆಂಗ್ಯೂ ಜ್ವರ ನಿಯಂತ್ರಣಕ್ಕೆ ಆರೋಗ್ಯ ಕೇಂದ್ರಗಳಲ್ಲಿ ಅವಶ್ಯವಿರುವ ಸಿಬ್ಬಂದಿ ನಿಯೋಜನೆ ಹಾಗೂ ಸಕಾಲಿಕ ಚಿಕಿತ್ಸೆ ನೀಡುವ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3. **ಶ್ರೀ ವಡ್ನಾಳ್ ರಾಜಣ್ಣ** ಇವರು – ಅಡಿಕೆ ಮತ್ತು ತೆಂಗು ಬೆಲೆ ಕುಸಿತದಿಂದ ಸಂಕಷ್ಟದಲ್ಲಿರುವ ರೈತರ ಸ್ಥಿತಿಯ ಬಗ್ಗೆ ಕೇಂದ್ರ ಸರ್ಕಾರದ ಗಮನ ಸೆಳೆಯಲು ಹಾಗೂ ತೋಟಗಾರಿಕೆ ಬೆಳೆಗಳ ಧಾರಣೆ ಕುಸಿಯುವುದನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

4. **ಶ್ರೀ ಹೆಚ್.ಡಿ. ರೇವಣ್ಣ** ಇವರು– ರಸ್ತೆ ನಿರ್ಮಾಣದ ಉದ್ದೇಶಕ್ಕೆಂದು ಭೂಸ್ವಾಧೀನಪಡಿಸಿಕೊಂಡಿರುವ ಹಾಸನ ಜಿಲ್ಲೆಯ ಹರದನಹಳ್ಳಿ ಗ್ರಾಮದ ಸರ್ವೆ ನಂ.115 ಮತ್ತು ಇತರೆ ಸ.ನಂ.ಗಳಲ್ಲಿನ 0–17ಗುಂಟೆ ಜಮೀನಿಗೆ ಸಂಬಂಧಿಸಿದಂತೆ ರೈತರಿಗೆ ಪರಿಹಾರ ನೀಡದೇ ತೊಂದರೆಯಾಗಿರುವುದರಿಂದ ಕೂಡಲೇ ಪರಿಹಾರ ನೀಡಲು ಹಾಗೂ ಅವಾರ್ಡ್‌ಗೆ ಅನುಮೋದನೆ ನೀಡುವಂತೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http:kla.kar.nic.in/assembly/lop/lob/htm)